## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಎಂ.ಎ.ಜೆ ಫೌಂಡೇಷನ್ ಇವರ ಅನನ್ಯ ಸ್ಕೂಲ್ ಆಫ್ ನರ್ಸಿಂಗ್, ಬೆಂಗಳೂರು ಈ ಶಾಲೆಯನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

-----

**ಓದಲಾಗಿದೆ:**
ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಶೂಶುಷಾ ಪರಿಷತ್ತು ಇವರ ಪತ್ರ ಸಂಖ್ಯೆ: ಕರಾಶುಪ/988/2019-20 ದಿನಾಂಕ 07/01/2019.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು, ಬೆಂಗಳೂರು ಇವರು ಎಂ.ಎ.ಜೆ ಫೌಂಡೇಷನ್ ಇವರ ಅನನ್ಯ ಸ್ಕೂಲ್ ಆಫ್ ನರ್ಸಿಂಗ್, ನಂ.39/1, ವಿನಾಯಕ ನಗರ, ಹೆಸರುಘಟ್ಟ ಮುಖ್ಯರಸ್ತೆ, ಚಿಕ್ಕಬಾಣವಾರ, ಬೆಂಗಳೂರು-560090 ಈ ಶಾಲೆಯನ್ನು 60 ಸೀಟುಗಳ ಪ್ರವೇಶ ಮಿತಿಯುಳ್ಳ ಡಿಪ್ಲೊಮಾ ಇನ್ ನರ್ಸಿಂಗ್ ಕೋರ್ಸ್‌ನೊಂದಿಗೆ ಹೊಸದಾಗಿ ಪ್ರಾರಂಭಿಸಲು ಶಾಲೆಯು ಹೊಂದಿರುವ ಮೂಲಭೂತ ಸೌಲಭ್ಯಗಳ ಬಗ್ಗೆ ತಪಾಸಣೆ ನಡೆಸಲು ತಪಾಸಣಾ ತಂಡವನ್ನು ರಚಿಸಲಾಗಿತ್ತದೆಂದು ತಿಳಿಸಿ, ತಪಾಸಣಾ ತಂಡವು ಈ ಶಾಲೆಯು ಹೊಂದಿರುವ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ಮಾಡಿರುವ ಶಿಫಾರಸ್ಸಿನನ್ವಯ ಈ ಶಾಲೆಯನ್ನು ಮೇಲ್ಕಂಡ ಕೋರ್ಸಿನೊಂದಿಗೆ 2019-20 ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಎಂ.ಎ.ಜೆ ಫೌಂಡೇಷನ್ ಇವರ ಅನನ್ಯ ಸ್ಕೂಲ್ ಆಫ್ ನರ್ಸಿಂಗ್, ನಂ.39/1, ವಿನಾಯಕ ನಗರ, ಹೆಸರುಘಟ್ಟ ಮುಖ್ಯರಸ್ತೆ, ಚಿಕ್ಕಬಾಣವಾರ, ಬೆಂಗಳೂರು-560090 ಈ ಶಾಲೆಯನ್ನು 60 ಸೀಟುಗಳ ಪ್ರವೇಶ ಮಿತಿಯುಳ್ಳ ಡಿಪ್ಲೊಮಾ ಇನ್ ನರ್ಸಿಂಗ್ ಕೋರ್ಸ್‌ನೊಂದಿಗೆ 2019-20 ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲುಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 333 ಎಂಎಂಸಿ 2019, ಬೆಂಗಳೂರು, ದಿನಾಂಕ: 16.09.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಎಂ.ಎ.ಜೆ ಫೌಂಡೇಷನ್ ಇವರ ಅನನ್ಯ ಸ್ಕೂಲ್ ಆಫ್ ನರ್ಸಿಂಗ್, ನಂ.39/1, ವಿನಾಯಕ ನಗರ, ಹೆಸರುಘಟ್ಟ ಮುಖ್ಯರಸ್ತೆ, ಚಿಕ್ಕಬಾಣವಾರ, ಬೆಂಗಳೂರು-560090 ಈ ಶಾಲೆಯನ್ನು 60 (ಅರವತ್ತು) ಸೀಟುಗಳ ಪ್ರವೇಶ ಮಿತಿಯುಳ್ಳ ಡಿಪ್ಲೊಮಾ ಇನ್ ನರ್ಸಿಂಗ್ ಕೋರ್ಸ್‌ನೊಂದಿಗೆ 2019-20 ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲುಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಮಂಜೂರಾತಿ ನೀಡಲು ಸರ್ಕಾರವು ಶಿಫಾರಸ್ಸು ಮಾಡಿದೆ.

### ಷರತ್ತು ಮತ್ತು ನಿಬಂಧನೆಗಳು

1. ಸದರಿ ಸಂಸ್ಥೆಯು ಮೇಲ್ಕಂಡಂತೆ ಮಂಜೂರಾಗಿರುವ ಸೀಟುಗಳ ಪೈಕಿ ಶೇ.10 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
2. ಕರ್ನಾಟಕ ರಾಜ್ಯ ನರ್ಸಿಂಗ್ ಪರಿಷತ್‌ನ ಮಂಜೂರಾತಿಯನ್ನು ಪಡೆಯತಕ್ಕದ್ದು.
3. ಕರ್ನಾಟಕ ರಾಜ್ಯ ನರ್ಸಿಂಗ್ ಪರಿಷತ್ ಇವರು ನಿಗದಿಪಡಿಸಿರುವ ಪಠ್ಯಕ್ರಮ ಮತ್ತು ಮಿಡ್‌ವೈಫ್ ಹಾಗೂ ನರ್ಸಿಂಗ್ ಪರೀಕ್ಷಾ ಮಂಡಳಿಯ ಕಾರ್ಯ ಯೋಜನೆಯನ್ನು ಪಾಲಿಸತಕ್ಕದ್ದು.
4. ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ನಿಗದಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಹೊಂದತಕ್ಕದ್ದು.

5. ಸದರಿ ಶಾಲೆಯು ಮುಂದಿನ 05 ವರ್ಷಗಳ ಕಾಲಮಿತಿಯೊಳಗೆ ಸ್ವಂತ ಆಸ್ಪತ್ರೆ ಹಾಗೂ ಸ್ವಂತ ಕಟ್ಟಡವನ್ನು ಹೊಂದಿರತಕ್ಕದ್ದು.
6. ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ಮತ್ತು ರಾಜ್ಯ ಸರ್ಕಾರ ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
7. 2003 ರ ಕರ್ನಾಟಕ ಡಿಪ್ಲೊಮಾ ಇನ್ ಜನರಲ್ ನರ್ಸಿಂಗ್, ಮಿಡ್‌ವೈಫರಿ: ಸೈಕಿಯಾಟ್ರಿ ಕೋರ್ಸುಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿಯ ಪ್ರಕಾರ ಹಾಗೂ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಪ್ರವೇಶ ನಿಯಮಾವಳಿಯನ್ವಯ ನಿಗದಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದ್ದಲ್ಲಿ 1991 ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.
8. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
9. ಮೇಲ್ಕಂಡ ಯಾವುದೇ ಷರತ್ತನ್ನು ಕಾಲೇಜು ಉಲ್ಲಂಘಿಸಿದಲ್ಲಿ, ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

K. Murali 16/09/19

**(ಕೆ.ಮುರಳಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

**ಇವರಿಗೆ:**

1. ಮುಖ್ಯ ಕಾರ್ಯನಿರ್ವಹಣಾ ನಿರ್ದೇಶಕರು, ಕರ್ನಾಟಕ ನರ್ಸಿಂಗ್ ಮತ್ತು ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ(ನಿಯಂತ್ರಣ) ಪ್ರಾಧಿಕಾರ ಹಾಗೂ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು.
2. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ನರ್ಸಿಂಗ್ ಕೌನ್ಸಿಲ್, ಸೂರ್ಯ ಅಪಾರ್ಟ್‌ಮೆಂಟ್ಸ್, ಗಾಂಧೀನಗರ, ಬೆಂಗಳೂರು-560009
3. ಅಧ್ಯಕ್ಷರು/ಪ್ರಾಂಶುಪಾಲರು, ಎಂ.ಎ.ಜೆ ಫೌಂಡೇಷನ್ ಇವರ ಅನನ್ಯ ಸ್ಕೂಲ್ ಆಫ್ ನರ್ಸಿಂಗ್, ನಂ.39/1, ವಿನಾಯಕ ನಗರ, ಹೆಸರುಘಟ್ಟ ಮುಖ್ಯರಸ್ತೆ, ಚಿಕ್ಕಬಾಣವಾರ, ಬೆಂಗಳೂರು-560090
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.